ಡಾ॥. ಜಿ. ಕಲ್ಪನರಾಜು ಭಾ.ಆ.ಸೇ.,
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪ್ರ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ.

ಫ್ಯಾಕ್ಸ್ ಸಂಖ್ಯೆ: 080-22251011
ಕಛೇರಿ ದೂರವಾಣಿ: 080-22353991
ಕರ್ನಾಟಕ ಸರ್ಕಾರದ ಸಚಿವಾಲಯ
3ನೇ ಗೇಟ್, ಮೊದಲನೇ ಮಹಡಿ
ಎಂ.ಎಸ್. ಬಿಲ್ಡಿಂಗ್, ಬೆಂಗಳೂರು – 560 001
ಇಮೇಲ್: prlsecy-wc@karnataka.gov.in

ಅ.ಸ.ಸಂಖ್ಯೆ:ಐಸಿಪಿಎಸ್/ಚೈಲ್ಡ್–50/2015–16

ದಿನಾಂಕ: 19–07–2017

ಮಾನ್ಯರೇ,

ವಿಷಯ: ಚೈಲ್ಡ್ ಲೈನ್ ಇಂಡಿಯಾ ಫೌಂಡೇಷನ್‌ನ ಸಹಯೋಗದೊಂದಿಗೆ ಅನುಷ್ಠಾನಗೊಳಿಸುತ್ತಿರುವ ಮಕ್ಕಳ ಸಹಾಯವಾಣಿ 1098 ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಕುರಿತು.

ಉಲ್ಲೇಖ: ದಿನಾಂಕ:13–02–2017 ರಂದು ನಡೆದ ರಾಜ್ಯ ಮಟ್ಟದ ಚೈಲ್ಡ್ ಲೈನ್ ಸಲಹಾ ಮಂಡಳಿ ಸಭೆಯ ಸಭಾ ನಡವಳಿಗಳಂತೆ.

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಕ್ಕಳ ಸಹಾಯವಾಣಿ 1098 ನ್ನು ಚೈಲ್ಡ್ ಲೈನ್ ಇಂಡಿಯಾ ಫೌಂಡೇಷನ್ (Child Line India Foundation) ಸಹಯೋಗದೊಂದಿಗೆ ಅನುಷ್ಠಾನಗೊಳಿಸುತ್ತಿರುವುದು ಸರಿಯಷ್ಟೆ. ಇತ್ತೀಚೆಗೆ ನಡೆದ ರಾಜ್ಯ ಮಟ್ಟದ ಚೈಲ್ಡ್ ಲೈನ್ ಸಲಹಾ ಮಂಡಳಿಯ ಸಭೆಯಲ್ಲಿ ಚೈಲ್ಡ್ ಲೈನ್ ಕೆಲಸ ಕಾರ್ಯಗಳು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಲ್ಲಿ ಕೆಲವು ತೀರ್ಮಾನವನ್ನು ಕೈಗೊಂಡಿದ್ದು ಅದರಂತೆ ಕ್ರಮ ಕೈಗೊಳ್ಳಲು ಈ ಮೂಲಕ ತಿಳಿಸಿದೆ.

1. ಮಕ್ಕಳ ಸಹಾಯವಾಣಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಸಾರ್ವಜನಿಕ ವಲಯದಲ್ಲಿ ಸಹಕಾರ ಪಡೆಯುವಲ್ಲಿ ಗುರುತಿನ ಚೀಟಿ ಅವಶ್ಯಕವಾಗಿರುತ್ತದೆ. ಪ್ರಸ್ತುತ ಚೈಲ್ಡ್ ಲೈನ್ ಇಂಡಿಯಾ ಫೌಂಡೇಷನ್ ಸಂಸ್ಥೆಯು ಕಾರ್ಯ ನಿರ್ವಹಿಸುತ್ತಿರುವ 26 ಜಿಲ್ಲೆಗಳಲ್ಲಿ ಬೆಂಗಳೂರು ನಗರ, ಬೆಳಗಾವಿ, ಬೆಂಗಳೂರು ಗ್ರಾಮಾಂತರ, ಶಿವಮೊಗ್ಗ ಬಾಗಲಕೋಟೆ, ಹಾವೇರಿ, ಗದಗ, ರಾಮನಗರ, ತುಮಕೂರು, ಚಿಕ್ಕಬಳ್ಳಾಪುರ ಹಾಗೂ ಕೋಲಾರ ಜಿಲ್ಲೆಗಳಲ್ಲಿ ಗುರುತಿನ ಚೀಟಿ ಹೊಂದಿರುವುದಿಲ್ಲ. ಈ ನಿಟ್ಟಿನಲ್ಲಿ ಚೈಲ್ಡ್ ಲೈನ್ ಇಂಡಿಯಾ ಫೌಂಡೇಷನ್ ಸಹಯೋಗದೊಂದಿಗೆ ಗುರುತಿನ ಚೀಟಿ ವಿತರಿಸಲು ಅಗತ್ಯ ಕ್ರಮ ಕೈಗೊಳ್ಳಲು ಕೋರಿದೆ.

2. ಜಿಲ್ಲೆಗಳಲ್ಲಿ ಚೈಲ್ಡ್ ಲೈನ್ ಅಡ್ವೈಸರಿ ಬೋರ್ಡ್‌ನ ಸಭೆಯನ್ನು ತಮ್ಮ ಅಧ್ಯಕ್ಷತೆಯಲ್ಲಿ ಪ್ರತಿ 6 ತಿಂಗಳಿಗೊಮ್ಮೆ ನಿಯಮಿತವಾಗಿ ನಡೆಸಬೇಕಾಗಿರುತ್ತದೆ. ಆದರೆ, ಇಲ್ಲಿಯವರೆಗೆ ಯಾದಗಿರಿ, ಚಿತ್ರದುರ್ಗ, ತುಮಕೂರು, ಚಿಕ್ಕಬಳ್ಳಾಪುರ, ಹಾಸನ, ರಾಮನಗರ, ಶಿವಮೊಗ್ಗ, ಬಾಗಲಕೋಟೆ ಜಿಲ್ಲೆಗಳಲ್ಲಿ ಸಭೆಯನ್ನು ನಡೆಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ. ಕೆಲವು ಜಿಲ್ಲೆಗಳಲ್ಲಿ 6 ತಿಂಗಳಿಗೊಮ್ಮೆ ಈ ಸಭೆಯನ್ನು ನಿಯಮಿತವಾಗಿ ನಡೆಯುತ್ತಿಲ್ಲ. ಸ್ಥಳೀಯ ಹಂತದಲ್ಲಿ ಎದುರಿಸುತ್ತಿರುವ ಸಮಸ್ಯೆಗಳ ಪರಿಹಾರಕ್ಕೆ ಜಿಲ್ಲಾ ಚೈಲ್ಡ್ ಲೈನ್ ಅಡ್ವೈಸರಿ ಬೋರ್ಡ್ ಸಭೆ ಅಗತ್ಯವಾಗಿದ್ದು ಕಡ್ಡಾಯವಾಗಿ 6 ತಿಂಗಳಿಗೊಮ್ಮೆ ಸಭೆ ನಡೆಸಲು ಕೋರಿದೆ.

3. ರಕ್ಷಣೆಗೆ ಅವಶ್ಯಕತೆ ಇರುವ ಮಗುವನ್ನು ರಕ್ಷಿಸಿ ಪುನರ್ವಸತಿ ಕೈಗೊಳ್ಳುವ ನಿಟ್ಟಿನಲ್ಲಿ ಮಕ್ಕಳ ಸಹಾಯವಾಣಿಯ ಕುರಿತು ವ್ಯಾಪಕ ಪ್ರಚಾರದ ಅಗತ್ಯವಿದೆ. ಸರ್ಕಾರಿ ಕಟ್ಟಡಗಳು, ಖಾಸಗಿ ಸಂಸ್ಥೆಗಳು, ಶಾಲೆಗಳ ಗೋಡೆಗಳ ಮೇಲೆ ಬರೆಸಲು ಲಗತ್ತಿಸಿರುವ ಮಾದರಿ ಭಿತ್ತಿ ಪತ್ರವನ್ನು ಹಾಗೂ ಗೋಡೆ ಬರಹದ ಮಾದರಿಯನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸುತ್ತಿದ್ದು, ಈ ಕುರಿತು ಕ್ರಮ ಕೈಗೊಳ್ಳಲು ಕೋರಿದೆ.

ಆದರಗಳೊಂದಿಗೆ,

ತಮ್ಮ ವಿಶ್ವಾಸಿ,

(ಡಾ॥ ಬಿ. ಬಸವರಾಜು)

ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ

ಪ್ರತಿಯನ್ನು:

1. Head, South Regional Resource Center Child Line India Foundation, T Nagar, Chennai-600017 ಮಾಹಿತಿಗಾಗಿ ಸಲ್ಲಿಸಿದೆ.
2. ಎಲ್ಲಾ ಜಿಲ್ಲೆಯ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಮಾಹಿತಿಗಾಗಿ ಸಲ್ಲಿಸಿದೆ.